ನಿ-330 (78)

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರಾಣೇಶ್.ಎಂ.ಕೆ ರವರು ನಿಯಮ 330 ರಡಿ ನೀಡಿರುವಸೂಚನೆಗೆ ಉತ್ತರ

**ವಿಷಯ:** ರಾಜ್ಯಾದಾದ್ಯಂತ ಹಿಂದೂ ಸಂಘಟನೆಗಳ (ಆರ್.ಎಸ್.ಎಸ್., ಎ.ಬಿ.ವಿ.ಪಿ, ಭಜರಂಗದಳ, ವಿಶ್ವ ಹಿಂದೂ ಪರಿಷತ್ ಮತ್ತು ಇತರೆ) ಕಾರ್ಯಕರ್ತರ ಮೇಲೆ ವಿವಿಧ ಪ್ರಕರಣಗಳಲ್ಲಿ ಕೇಸ್‌ಗಳು ದಾಖಲಾಗಿದ್ದು, ಈ ಪ್ರಕರಣಗಳಿಂದ ಹಿಂದೂ ಕಾರ್ಯಕರ್ತರಿಗೆ ಸರ್ಕಾರಿ ನೌಕರಿ ಪಡೆದುಕೊಳ್ಳಲು ಮದುವೆ ಮಾಡಿಕೊಳ್ಳಲು ಇನ್ನಿತರೆ ತೊಂದರೆಗಳನ್ನು ಎದುರಿಸಬೇಕಾಗುವ ಕಾರಣ ಹಿಂದೂ ಕಾರ್ಯಕರ್ತರ ಮೇಲಿನ ಕೇಸ್‌ಗಳನ್ನು ಹಿಂಪಡೆಯುವ ವಿಚಾರವಾಗಿ ಸದನದಲ್ಲಿ ಪ್ರಸ್ತಾಪಿಸುವಬಗ್ಗೆ.

**ಉತ್ತರ:**

ರಾಜ್ಯದಲ್ಲಿನ ವಿವಿಧ ಸಂಘಟನೆಗಳ ಸದಸ್ಯರುಗಳು ಪ್ರತಿಭಟನೆಗಳನ್ನು ನಡೆಸುವ ಸಂದರ್ಭದಲ್ಲಿ ಅವರುಗಳ ಸದಸ್ಯರಾಗಿರುವ ಸಂಘಟನೆಯನ್ನು ಗಮನದಲ್ಲಿಟ್ಟುಕೊಳ್ಳದೇ ಕೇವಲ ಅವರು ಭಾಗಿಯಾಗಿರುವ ಅಪರಾಧ ಪ್ರಕರಣಗಳನ್ನು ಮಾತ್ರ ಗಮನದಲ್ಲಿಟ್ಟುಕೊಂಡು, ಅವರುಗಳು ಎಸಗಿದ ಅಪರಾಧಗಳಿಗನುಗುಣವಾಗಿ ರಾಜ್ಯದಲ್ಲಿನ ವಿವಿಧ ಠಾಣೆಗಳ ತನಿಖಾಧಿಕಾರಿಗಳು ಸಂಬಂಧಪಟ್ಟ ಐಪಿಸಿ ಹಾಗೂ ಇತರೆ ಕಾಯ್ದೆಗಳ ಕಲಂಗಳಡಿ ನಿಯಮಗಳಾನುಸಾರ ಪ್ರಕರಣಗಳನ್ನು ದಾಖಲಿಸಿ, ವಿಚಾರಣೆ ಕೈಗೊಂಡು ನ್ಯಾಯಾಲಯಕ್ಕೆ ದೋಷರೋಪಣಾ ಪಟ್ಟಿ ಸಲ್ಲಿಸಲಾಗುತ್ತದೆ.

ರಾಜ್ಯದ ವಿವಿಧ ಸಂಘಟನೆಗಳ ಸದಸ್ಯರುಗಳ ವಿರುದ್ಧ ದಾಖಲಾಗಿರುವ ಪ್ರಕರಣಗಳನ್ನು ಅಭಿಯೋಜನೆಯಿಂದ ಹಿಂಪಡೆಯುವಂತೆ ಜನಪ್ರತಿನಿಧಿಗಳಿಂದ, ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳಿಂದ ಸಲ್ಲಿಕೆಯಾದ ಮನವಿ/ಪ್ರಸ್ತಾವನೆಗಳ ಕುರಿತು ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರು, ನಿರ್ದೇಶಕರು, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ ಇವರುಗಳ ಅಭಿಪ್ರಾಯ/ವರದಿ ಪಡೆದು ಪರಿಶೀಲಿಸಿ, ಕಾನೂನು ಇಲಾಖೆ ಅಭಿಪ್ರಾಯದೊಂದಿಗೆ ಅರ್ಹ ಪ್ರಕರಣಗಳನ್ನು ಸಚಿವ ಸಂಪುಟದ ಉಪ ಸಮಿತಿಯ ಮುಂದೆ ಮಂಡಿಸಿ, ಸಮಿತಿಯು ಅಭಿಯೋಜನೆಯಿಂದ ಹಿಂಪಡೆಯಲು ಸೂಕ್ತವೆಂದು ಶಿಫಾರಸ್ಸು ಮಾಡಿದ ಪ್ರಕರಣಗಳನ್ನು ಮಾತ್ರ ಸಚಿವ ಸಂಪುಟದ ಅನುಮೋದನೆಯ ನಂತರ ಸಿ.ಆರ್.ಪಿ.ಸಿ 321ರಡಿ ಅಭಿಯೋಜನೆಯಿಂದ ಹಿಂಪಡೆಯಲು ಸರ್ಕಾರದ ಮಂಜೂರಾತಿ ನೀಡಿ ಆದೇಶ ಹೊರಡಿಸಲಾಗುತ್ತದೆ.

ಈ ಮೇಲಿನ ಪ್ರಕ್ರಿಯೆಯಂತೆ ಸರ್ಕಾರದಲ್ಲಿ ಸಲ್ಲಿಕೆಯಾದ ಮನವಿ/ ಪ್ರಸ್ತಾವನೆಗಳ ಸಂಬಂಧ ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವ ಪ್ರಕರಣಗಳನ್ನು ನಿಯಮಾನುಸಾರ ಅಭಿಯೋಜನೆಯಿಂದ ಹಿಂಪಡೆಯುವ ಬಗ್ಗೆ ಕ್ರಮವಹಿಸಲಾಗುತ್ತದೆ.

---

ಸಂಖ್ಯೆ: ಇ-ಒಇ 11 ಸದನ 2020

(ಬಸವರಾಜ ಬೊಮ್ಮಾಯಿ)
ಗೃಹ ಸಚಿವರು